ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರವನ್ನು ಚಲಾಯಿಸಿ ಆಡಳಿತಗಾರರ ದಿನಾಂಕ: 11 –10 –2022ರ ನಡವಳಿಗಳು

ವಿಷಯದ ಸಂಖ್ಯೆ: 260/2022-23

ಪ್ರಸ್ತಾವನೆ :

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ 2020–21ನೇ ಸಾಲಿನ ಲೆಕ್ಕ ಶೀರ್ಷಿಕೆ P3288 Construction of New Building for Tailoring, Knitting and Emroidary training centre ರಡಿ ಮಂಜೂರಾಗಿರುವ Construction of Basavalingappa Samudaya Bhavana and Construction of Ambedkar Bhavan in Amruthahalli in ward no-07 ಎಂಬ ಕಾಮಗಾರಿಗೆ ಅಂದಾಜು ಮೊತ್ತ ರೂ.175.00 ಲಕ್ಷಗಳಾಗಿರುತ್ತದೆ.

ಸದರಿ ಕಾಮಗಾರಿಯನ್ನು ಕೈಗೊಳ್ಳಲು ರೂ.175.00 ಲಕ್ಷಗಳಿಗೆ ಕರ್ನಾಟಕ ಲೋಕೋಪಯೋಗಿ ಇಲಾಖೆಯ 2021–22ನೇ ಸಾಲಿನ ದರಪಟ್ಟಿಯಂತೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿರುತ್ತದೆ. ಸದರಿ ಕಾಮಗಾರಿಯನ್ನು ಸಾರ್ವಜನಿಕ ಸೇವಾ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿದ್ದರಿಂದ ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಮಂಜೂರಾತಿಯನ್ನು ನಿರೀಕ್ಷಿಸಿ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ ರವರು ದಿನಾಂಕ: 16–06–2022 ರಂದು ಟೆಂಡರ್ ಆಹ್ವಾನಿಸಿರುತ್ತಾರೆ.

ಸದರಿ ಕಾಮಗಾರಿಯ ಟೆಂಡರ್‌ಗೆ ಸಂಬಂಧಿಸಿದಂತೆ ತಾಂತ್ರಿಕ ಬಿಡ್‌ಅನ್ನು ದಿ:30–06–2022 ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಇಬ್ಬರು ಬಿಡ್‌ದಾರರಾದ UMESH N (VENKATESHWARA ASPHALT AND CONCRETE MIX) ಮತ್ತು YELARTHI DAMU (SRI SAI RAM INFRATECH) ರವರು ಭಾಗವಹಿಸಿದ್ದು, ತಾಂತ್ರಿಕವಾಗಿ ಅರ್ಹರಾಗಿರುವ ಬಿಡ್ದುದಾರರ ಆರ್ಥಿಕಬಿಡ್‌ಅನ್ನು ತೆರೆಯಲು ಮುಖ್ಯ ಅಭಿಯಂತರರು ಯಲಹಂಕ ವಲಯ ರವರು ಅನುಮೋದಿಸಿರುವಂತೆ ದಿನಾಂಕ: 15–07–2022 ರಂದು ಆರ್ಥಿಕ ಬಿಡ್‌ನ್ನು ತೆರೆಯಲಾಗಿದ್ದು, ವಿವರ ಕೆಳಕಂಡಂತೆ ಇರುತ್ತದೆ.

ಕ್ರ. ಸಂ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ	ಗುತ್ತಿಗೆದಾರರು ನಮೂದಿಸಿರುವ ದರಗಳು	ಟೆಂಡರ್‌ಗಿಟ್ಟ ಮೊತ್ತಕ್ಕೆ ಹೊಲಿಸಿದಾಗ ಶೇಕಡವಾರು	ದರ ಸಂದಾನದ ನಂತರ ಗುತ್ತಿಗೆದಾರರು ನಮೂದಿಸಿರುವ ದರಗಳು
1	UMESH N (VENKATESHWARA ASPHALT AND CONCRETE MIX)	15311216.89	15739627.56	(+)2.79% ಹೆಚ್ಚು	15735337.60 (+)2.77% ಹೆಚ್ಚು

ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿದೆ.

1. ಪ್ರಸ್ತಾಪಿತ ಕಾಮಗಾರಿಗಳ ಸ್ಥಳ ಪರಿವೀಕ್ಷಣೆ ಮಾಡಿ ಕಾಮಗಾರಿಯ ಅವಶ್ಯಕತೆ ಬಗ್ಗೆ ಹಾಗೂ ಸದರಿ ಕಾಮಗಾರಿಯನ್ನು ಪಾಲಿಕೆಯ ಹಿಂದಿನ ಆಯವ್ಯಯಗಳಲ್ಲಿ/ಅನುದಾನಗಳಲ್ಲಿ ಕೈಗೊಂಡಿಲ್ಲದೇ ಇರುವ ಮತ್ತು ಪುನಾರಾವರ್ತನೆಯಾಗದೇ ಇರುವುದನ್ನು ಖಚಿತ ಪಡಿಸಿಕೊಳ್ಳುವುದು.
2. ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಪೂರ್ವದಲ್ಲಿ, ಆಯುಕ್ತರವರ ಕಛೇರಿ ಆದೇಶ ಸಂಖ್ಯೆ:ಮುಲೆಅ/ಆಯವ್ಯಯ/2019–20/ಪಿಆರ್/11/2018–19 ದಿನಾಂಕ:12–06–2019 ಮತ್ತು ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ:ಬಿಬಿಎಂಪಿ/ಆ/ಪಿ.ಆರ್/5287/2019–20, ದಿನಾಂಕ:05–11–2019 ಮತ್ತು ಬಿಬಿಎಂಪಿ/ಆ/ ಪಿ.ಆರ್/6166/2019–20 ದಿ:13–12–2019 ರಲ್ಲಿನ ನಿರ್ದೇಶನಗಳನ್ನು / ಪ್ರಕ್ರಿಯೆಗಳನ್ನು ಅನುಸರಿಸತಕ್ಕದ್ದು.
3. ಕಾಮಗಾರಿಗೂ ಮುನ್ನ ಹಾಗೂ ನಂತರದ ಜಿ.ಪಿ.ಎಸ್.ಯುಳ್ಳ ಛಾಯಚಿತ್ರಗಳನ್ನು ಸಲ್ಲಿಸತಕ್ಕದ್ದು.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ. 175.00 ಲಕ್ಷಗಳಿಗೆ ಮಾನ್ಯ ಆಡಳಿತಗಾರರು, ಬಿಬಿಎಂಪಿ ರವರಿಂದ ಆಡಳಿತಾತ್ಮಕ ಅನುಮೋದನೆಯನ್ನು ನಿರೀಕ್ಷಿಸಿ ಟೆಂಡರ್ ಅಹ್ವಾನಿಸಲಾಗಿರುವುದರಿಂದ, ಘಟನ್ನೋತ್ತರ ಆಡಳಿತಾತ್ಮಕ ಅನುಮೋದನೆ ಹಾಗೂ ಸದರಿ ಕಾಮಗಾರಿಯನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿರುವುದರಿಂದ ಗುತ್ತಿಗೆದಾರಾದ UMESH N (VENKATESHWARA ASPHALT AND CONCRETE MIX) ರವರು ನಮೂದಿಸಿರುವ ಮೊತ್ತವಾದ ರೂ.1,57,35,337.60 ಗಳನ್ನು ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇ.(+)2.77% ರಷ್ಟು ಅಧಿಕ ಟೆಂಡರ್ ಪ್ರಿಮಿಯಂಗೆ ಅನುಮೋದನೆ ನೀಡಲು ಕೋರುತ್ತಾ, ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರವನ್ನು ಚಲಾಯಿಸಿ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಲಯ ಆಯುಕ್ತರು (ಯಲಹಂಕ) ರವರ ದಿನಾಂಕ: 11–08–2022ರ ಟಿಪ್ಪಣಿ.

ತೀರ್ಮಾನ: ವಲಯ ಆಯುಕ್ತರು (ಯಲಹಂಕ)ರವರ ದಿನಾಂಕ:11–08–2022ರ ಟಿಪ್ಪಣಿಯನ್ನು ಒಪ್ಪಿದೆ.

(ರಾಕೇಶ್ ಸಿಂಗ್)
ಆಡಳಿತಗಾರರು